## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 177 (202)

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 18.08.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆ ಸುರಿದ ಕಾರಣದಿಂದ ಈ ಸಾಲಿನಲ್ಲಿ ಅಧಿಕ ಪ್ರಮಾಣದಲ್ಲಿ ತೋಟಗಾರಿಕೆ ಬೆಳೆಗಳು ನಾಶವಾಗಿದ್ದು, ಬೆಳೆಗಾರರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಗಮನಕ್ಕೆ ಬಂದಿದೆ.<br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2026 ರ ಮುಂಗಾರು ಹಂಗಾಮಿನಲ್ಲಿ ಅತೀ ಹೆಚ್ಚು ಮಳೆಯಿಂದ ಹಾನಿಗೊಳಗಾದ ತೋಟಗಳಿಗೆ ತೋಟಗಾರಿಕೆ ಇಲಾಖೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳ ತಂಡದಿಂದ ಬೆಳೆಹಾನಿ ಸಮೀಕ್ಷೆ ಕೈಗೊಳ್ಳಲಾಗಿರುತ್ತದೆ. ಅತೀ ಹೆಚ್ಚು ಮಳೆಯಿಂದ ಈವರೆಗೂ ಅಂದಾಜು 137 ರೈತರ 18.94 ಹೆಕ್ಟೇರ್ ಪ್ರದೇಶದಲ್ಲಿ ಅಡಿಕೆ ಬೆಳೆಹಾನಿಯಾಗಿರುವುದಾಗಿ ವರದಿಯಾಗಿರುತ್ತದೆ. SDRF/NDRF ಮಾರ್ಗಸೂಚಿಗಳನ್ವಯ ಒಟ್ಟು ರೂ. 5.06 ಲಕ್ಷ ಪರಿಹಾರ ವಿತರಣೆಗೆ ವರದಿಯನ್ನು ಕಂದಾಯ ಇಲಾಖೆಗೆ ಸಲ್ಲಿಸಲಾಗಿರುತ್ತದೆ. |
| ಆ) | ಅತೀ ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಹಾನಿಯಾಗಿದ್ದು, ಈ ಬಗ್ಗೆ ಸರ್ಕಾರ ಸರ್ವೇ ಮಾಡಿದೆಯೇ; ಬೆಳೆಗಾರರಿಗೆ ಸೂಕ್ತ ಪರಿಹಾರ ಒದಗಿಸಲಾಗಿದೆಯೇ; (ವಿವರ ನೀಡುವುದು) | |
| ಇ) | ತೋಟಗಾರಿಕಾ ಬೆಳೆ ನಾಶವಾಗಿರುವ ಎಷ್ಟು ರೈತರಿಗೆ ಪರಿಹಾರ ಧನ ನೀಡಲಾಗಿದೆ; ಹಾಳಾಗಿರುವ ತೋಟಗಳ ಬಗ್ಗೆ ಸರ್ಕಾರದ ಮುಂದಿರುವ ಯೋಜನೆಗಳಾವುವು? (ವಿವರ ನೀಡುವುದು) | ನೈಸರ್ಗಿಕ ವಿಕೋಪದಿಂದ ಹಾನಿಯಾದ ತೋಟಗಾರಿಕೆ ಬೆಳೆಗಳಿಗೆ NDRF/SDRF ಮಾರ್ಗಸೂಚಿಯನ್ವಯ ಪ್ರತಿ ಹೆಕ್ಟೇರ್ ಮಳೆಯಾಶ್ರಿತ ಬೆಳೆಗಳಿಗೆ ರೂ.8500/- ನೀರಾವರಿ ಬೆಳೆಗಳಿಗೆ ರೂ.17000/- ಮತ್ತು ಬಹುವಾರ್ಷಿಕ ಬೆಳೆಗಳಿಗೆ ರೂ.22500/- ಗಳನ್ನು ಕಂದಾಯ ಇಲಾಖೆಯ ಪರಿಹಾರ ತಂತ್ರಾಂಶದ ಮುಖಾಂತರ ವಿತರಿಸಲಾಗುತ್ತದೆ. |

| | | |
|---|---|---|
| | | ತೋಟಗಾರಿಕೆ ಬೆಳೆಗಳನ್ನು ರಕ್ಷಿಸಲು ಸರ್ಕಾರದ ಯೋಜನೆಗಳು ಈ ಕೆಳಕಂಡಂತಿರುತ್ತವೆ.<br><br>1. ಹವಮಾನ ವೈಪರೀತ್ಯದಿಂದ ಉಂಟಾಗುವ ನಷ್ಟ ಪರಿಹಾರವನ್ನು ತುಂಬಿ ಕೊಡುವ ನಿಟ್ಟಿನಲ್ಲಿ ಹವಮಾನ ಆಧಾರಿತ ಬೆಳೆ ವಿಮೆ ಯೋಜನೆಯನ್ನು ಅಡಿಕೆ ಮತ್ತು ಕಾಳುಮೆಣಸು ಬೆಳೆಗಳಿಗೆ ಜಿಲ್ಲೆಯಲ್ಲಿ ಅನುಷ್ಠಾನಗಳಿಸಲಾಗುತ್ತಿದ್ದು, 2026-27 ನೇ ಸಾಲಿನಲ್ಲಿ ಇಲ್ಲಿಯವರೆಗೂ 4,80,277 ರೈತರು ಬೆಳೆವಿಮೆಗೆ ನೊಂದಣಿ ಮಾಡಿಕೊಂಡಿರುತ್ತಾರೆ.<br>2. ತೋಟಗಾರಿಕೆ ಬೆಳೆಗಳಿಗೆ ತಗುಲುವ ಕೀಟ ಮತ್ತು ರೋಗಗಳನ್ನು ನಿಯಂತ್ರಿಸುವ ಸಂಬಂಧ ಇಲಾಖೆಯ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್(NHM) ಯೋಜನೆಯಡಿ ಶೇ.30 ರಂತೆ ರೂ.1500/- ಪ್ರತಿ ಹೆಕ್ಟೇರ್ ಗೆ ಸಸ್ಯ ಸಂರಕ್ಷಣಾ ಔಷಧಿ ಖರೀದಿಗೆ ಸಹಾಯಧನ ನೀಡಲಾಗುತ್ತಿದೆ. ಗರಿಷ್ಠ 2 ಹೆಕ್ಟೇರ್‌ವರೆಗೆ ಸಹಾಯಧನ ನೀಡಲಾಗುತ್ತದೆ.<br>3. ಅಡಿಕೆ ಬೆಳೆಯಲ್ಲಿ ಕಂಡುಬರುವ ಹಳದಿ ಎಲೆ, ಎಲೆಚುಕ್ಕೆ ಹಾಗೂ ಕೊಳೆ ರೋಗಗಳ ಸಮಗ್ರ ನಿರ್ವಹಣೆ ಮಾಡಲು ಔಷಧಿ ಸಿಂಪರಣೆಗಾಗಿ ಶೇ.60 ರಂತೆ ರೂ.3000 ಗಳನ್ನು (NHM-ರೂ. 1500/- + ರಾಜ್ಯ ವಲಯ ಯೋಜನೆಯ-ರೂ.1500/-) ನೀಡಲಾಗುತ್ತದೆ. ಗರಿಷ್ಠ 2 ಹೆಕ್ಟೇರ್‌ವರೆಗೆ ಸಹಾಯಧನ ನೀಡಲಾಗುತ್ತದೆ.<br>4. ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ- ಪ್ರತಿ ಹನಿಗೆ ಅಧಿಕ ಬೆಳೆ ಕಾರ್ಯಕ್ರಮದಡಿಯಲ್ಲಿ (PDMC) ಹನಿ ಹಾಗೂ ತುಂತುರು ನೀರಾವರಿ ಘಟಕ ಅಳವಡಿಸಿಕೊಳ್ಳಲು ಪ್ರಸಕ್ತ ಸಾಲಿನಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಗೆ ಒಳಪಡುವ ತಾಲ್ಲೂಕುಗಳಲ್ಲಿ ಅಡಿಕೆ ಬೆಳೆಗೆ ಗರಿಷ್ಟ 2 ಹೆಕ್ಟರ್ ಪ್ರದೇಶದವರೆಗೆ ರೈತರಿಗೆ ಶೇ.90ರಷ್ಟು ಸಹಾಯಧನ ನೀಡಲಾಗುತ್ತಿದೆ. ನಂತರದ 2 ಹೆಕ್ಟರ್ ರಿಂದ 5 ಹೆಕ್ಟರ್ ಪ್ರದೇಶದವರೆಗೆ ಎಲ್ಲಾ ವರ್ಗದ ರೈತರಿಗೆ ಶೇ. 45 ರಷ್ಟು ಸಹಾಯಧನ ನೀಡಲಾಗುತ್ತಿದೆ. |

| | | |
|---|---|---|
| | | 5. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಅಡಿಕೆ ಪ್ರದೇಶ ವಿಸ್ತರಣೆಯಡಿ ಪ್ರತಿ ಹೆಕ್ಟೇರ್‌ಗೆ ರೂ. 201218/- ನೀಡಲಾಗುತ್ತದೆ.<br>6. ತೋಟಗಾರಿಕೆಯಲ್ಲಿ ಯಾಂತ್ರೀಕರಣವನ್ನು ಉತ್ತೇಜಿಸಲು ವಿವಿಧ ಕೃಷಿ ಯಂತ್ರೋಪಕರಣಗಳ ಖರೀದಿಗೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಹಾಗೂ ತೋಟಗಾರಿಕೆಯಲ್ಲಿ ವಿನೂತನ ತಂತ್ರಜ್ಞಾನ ಹಾಗೂ ಯಾಂತ್ರೀಕರಣ ಯೋಜನೆಯಡಿ ಮಹಿಳೆಯರಿಗೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ. 50 ರಷ್ಟು ಮತ್ತು ಸಾಮಾನ್ಯ ರೈತರಿಗೆ ಶೇ. 40 ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.<br>7. ಜೇನುಸಾಕಾಣಿಕೆಯಿಂದ ರೈತರು ಹೆಚ್ಚುವರಿ ಆದಾಯ ಗಳಿಸುವ ಜೊತೆಗೆ ತೋಟಗಾರಿಕೆ ಬೆಳೆಗಳಲ್ಲಿ ಪರಾಗಸ್ಪರ್ಶವನ್ನು ಹೆಚ್ಚಿಸಿ ಅಧಿಕ ಉತ್ಪಾದನೆಗೆ ಸಹಕಾರಿಯಾಗುತ್ತದೆ. ಈ ಹಿನ್ನಲೆಯಲ್ಲಿ ಮಧುವನ ಮತ್ತು ಜೇನು ಸಾಕಾಣಿಕೆ ಅಭಿವೃದ್ಧಿ ಯೋಜನೆ ಹಾಗೂ ಜಿಲ್ಲಾವಲಯದ ಜೇನು ಸಾಕಾಣಿಕೆ ಯೋಜನೆಯಡಿ ಜೇನು ಪೆಟ್ಟಿಗೆ, ಜೇನು ಕುಟುಂಬ, ಸ್ಟ್ಯಾಂಡ್ ಹಾಗೂ ಜೇನು ತೆಗೆಯುವ ಯಂತ್ರ ಖರೀದಿಗೆ ಶೇ.75 ರಷ್ಟು ಸಾಮಾನ್ಯ ಹಾಗೂ ಶೇ.90 ರಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಸಹಾಯಧನ ನೀಡಲಾಗುತ್ತಿದೆ. |

ಸಂಖ್ಯೆ: HORTI 434 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು